



## ನಿತ್ಯ ಪಂಚಾಂಗ

ಮಾಸ: ಪಾಲ್ಗುಣ । ಸಂವತ್ಸರ: ಶೋಭಾಕೃತ

04–04–2024 – ಗುರುವಾರ

| | |
|---|---|
| ತಿಥಿ | : ದಶಮಿ |
| ಪಕ್ಷ | : ಕೃಷ್ಣ |
| ನಕ್ಷತ್ರ | : ಶ್ರಾವಣ |
| ಯೋಗ | : ಸಿದ್ಧಿ |
| ಕರಣ | : ವಿಷ್ಟಿ |
| ಸೂರ್ಯೋದಯ | : 06:17:22 |
| ಸೂರ್ಯಾಸ್ತ | : 18:42:28 |
| ರಾಹು | : 14:03–15:36 |
| ಯಮಘಂಡ | : 06:17–07:51 |
| ಗುಳಿಕ | : 09:24–10:57 |

## ತುಂಗಭದ್ರಾ ನೀರಿನ ಮಟ್ಟ



ಬುಧವಾರ : 03–04–2024

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1580.16 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 926 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 4.545 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| ಕಳೆದ ವರ್ಷ ಇದೇ ದಿನ | |
| ಇಂದಿನ ಮಟ್ಟ | 1583.81 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 5823 ಕ್ಯುಸೆಕ್ |
| ಸಾಮರ್ಥ್ಯ | 6.573 ಟಿಎಂಸಿ |

# ಜಯಂತಿ ಸರಳ ಆಚರಣೆಗೆ ನಿರ್ಧಾರ



■ **ಹಂಪಿ ಟೈಮ್ಸ್ ಹಗರಿಬೊಮ್ಮನಹಳ್ಳಿ**

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಸರ್ಕಾರದ ಆದೇಶದಂತೆ ಮತ್ತು ಚುನಾವಣೆ ಆಯೋಗದ ನೀತಿ ಸಂಹಿತೆಯಂತೆ ಡಾ.ಬಾಬು ಜಗಜೀವನ್‌ರಾಮ್ ಮತ್ತು ಡಾ.ಬಿ.ಆರ್. ಅಂಬೇಡ್ಕರ್‌ರವರ ಜಯಂತಿಗಳನ್ನು ಸರಳವಾಗಿಯೇ ಆಚರಿಸಲಾಗುತ್ತದೆ ಎಂದು ರಾಷ್ಟ್ರೀಯ ಹಬ್ಬಗಳ ಅಧ್ಯಕ್ಷರು ಹಾಗೂ ತಹಸೀಲ್ದಾರ್ ಚಂದ್ರಶೇಖರ್ ಶಂಭಣ್ಣ ಗಾಳಿ ತಿಳಿಸಿದರು.

ಪಟ್ಟಣದ ತಾ.ಪಂ.ಸಭಾಂಗಣದಲ್ಲಿ, ಡಾ.ಬಾಬು ಜಗಜೀವನ್‌ರಾಮ್‌ರವರ 117ನೇ ಜಯಂತಿಯನ್ನು ಎ.05ರಂದು ಹಾಗೂ ಡಾ.ಬಿ.ಆರ್.ಅಂಬೇಡ್ಕರ್‌ರವರ 133ನೇ ಜಯಂತಿಯನ್ನು ಎ.14ರಂದು ಆಚರಿಸುವ ಹಿನ್ನೆಲೆಯಲ್ಲಿ ಬುಧವಾರ ಕರೆಯಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.


ಜಯಂತಿ ಆಚರಣೆಯ ಸಲಹೆಗಳ ಚರ್ಚೆಯಲ್ಲಿರುವಾಗ, ಮಧ್ಯಪ್ರವೇಶಿಸಿದ ದಲಿತ ಮುಖಂಡ ಮಾದೂರು ಮಹೇಶ ಮಾತನಾಡಿ, ತಾಲೂಕಿನ ಹೊಳೆ ಮುತ್ಕೂರು ಗ್ರಾಮದಲ್ಲಿ ಇತ್ತೀಚಿಗೆ ಸಂವಿಧಾನ ಜಾಗೃತಿ ವೇಳೆ ದೇಗುಲದಲ್ಲಿ ಹಾಕಲಾಗಿದ್ದ ವೇದಿಕೆಯನ್ನು ದಿಢೀರನೇ ಸ್ಥಳಾಂತರಿಸಲಾಯಿತು. ಇದನ್ನು ನೋಡಿದರೆ, ಇಂದಿಗೂ ಅಸ್ಪೃಶ್ಯತೆ, ಜಾತಿ ತಾರತಮ್ಯ ನಡೆಯುತ್ತಿದೆ ಎನ್ನಿಸುತ್ತಿದೆ. ಕಾರ್ಯಕ್ರಮ ಸರ್ಕಾರದ್ದೇ ಆಗಿದ್ದರೂ ವೇದಿಕೆ ಬದಲಾವಣೆಗೆ ಕಾರಣ ನೀಡುತ್ತಿಲ್ಲ. ಇದಕ್ಕೆ ಗ್ರಾ.ಪಂ.ಪಿಡಿಒರೇ ಸಾಕ್ಷಿ, ಇದಕ್ಕೆಲ್ಲ ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣವೆಂದು ಆರೋಪಿಸಿದರು.

ಪ್ರತಿಕ್ರಿಯಿಸಿದ ತಹಸೀಲ್ದಾರ್ ಈ ವಿಷಯ ನಮ್ಮ ಗಮನಕ್ಕೆ ಬಂದಿಲ್ಲ, ಚುನಾವಣೆ ಬಳಿಕ ಪರಿಶೀಲಿಸುವುದಾಗಿ ತಿಳಿಸಿದರು. ಕೂಡಲೆ ಡಾ.ಬಿ.ಆರ್.ಅಂಬೇಡ್ಕರ್ ಸಂಘದ ತಾಲೂಕು ಅಧ್ಯಕ್ಷ ಗದ್ದಿಕೆರೆ ದೊಡ್ಡಬಸಪ್ಪ ಮಾತನಾಡಿ, ಇಂತಹ ಘಟನೆಗಳಿಗೆ ಅವಕಾಶ ನೀಡಬಾರದಿತ್ತು. ಆದರೂ ದುರ್ದೈವ, ಘಟನೆಯ ವಿವರವನ್ನು ಪಡೆಯುವ ಮೂಲಕ, ತಪಿತಸ್ಥರ ಮೇಲೆ ಕ್ರಮ ಕೈಗೊಳ್ಳಬೇಕು, ಅಲ್ಲದೆ ಚುನಾವಣೆಯ ಒಳಗೆ ಅಲ್ಲೊಂದು ಶಾಂತಿ ಸಭೆ ನಡೆಯಲೇ ಬೇಕು ಎಂದು ಒತ್ತಾಯಿಸಿದರು.

ತಾ.ಪಂ.ಇಒ ಡಾ.ಪರಮೇಶ್ವರಪ್ಪ ಮಾತನಾಡಿ, ಜಯಂತಿ ಆಚರಣೆಗಳು ಕಚೇರಿಯಲ್ಲಿಯೇ ಸರಳವಾಗಿ ಆಚರಿಸಲಾಗುವುದು, ಮುಖಂಡರು ಮತ್ತು ಅಧಿಕಾರಿಗಳು ಭಾಗಿಯಾಗುವ ಮೂಲಕ, ಈ ಕಾರ್ಯಕ್ರಮಕ್ಕೆ ನಿಮ್ಮೆಲ್ಲರ ಸಹಕಾರ ಅಗತ್ಯವೆಂದರು.

ಈ ವೇಳೆ ಹೆಗ್ಡಾಳ್ ರಾಮಣ್ಣ, ಬೆಣಕಲ್ ಪ್ರಕಾಶ್, ಬಿ.ಜಿ.ಹಳ್ಳಿ ಮಹೇಶ್, ಮೇಘರಾಜ್, ಡಾ.ಬಾಬು ಜಗಜೀವನ್‌ರಾಮ್ ವೇದಿಕೆಯ ತಾಲೂಕು ಅಧ್ಯಕ್ಷ ಪ್ರಭಾಕರ, ಯಡ್ರಮ್ಮನಹಳ್ಳಿ ಮರಿಯಪ್ಪ, ದಶಮಾಪುರ ಮರಿಯಪ್ಪ, ಎಚ್.ಶಿವಕುಮಾರ್, ಡಿಎಸ್‌ಎಸ್ ತಾಲೂಕು ಅಧ್ಯಕ್ಷ ಕೋಗಳಿ ಉಮೇಶ್, ಬಿಇಒ ಮೈಲೇಶ್ ಬೇವೂರ್, ತಾಲೂಕು ವೈದ್ಯಾಧಿಕಾರಿ ಡಾ.ಶಿವರಾಜ್, ದೇವರಾಜ್ ಅರಸು ಹಿಂದುಳಿದ ವರ್ಗಗಳ ಇಲಾಖೆ ನಾಗರಾಜ್, ಸಮಾಜ ಕಲ್ಯಾಣ ಇಲಾಖೆಯ ಮ್ಯಾನೇಜರ್ ಶೋಭಾ ಸೇರಿದಂತೆ ಇತರರಿದ್ದರು. ಸಮಾಜ ಕಲ್ಯಾಣ ಇಲಾಖೆಯ ಆಂಜನೇಯ ಹುಲ್ಲಾಳ್ ಸ್ವಾಗತ ಮಾಡಿದರು.

## ನೀತಿ ಸಂಹಿತೆ: ಮಹಾತ್ಮರ ಜಯಂತಿ ಆಚರಣೆ ಸರಳ





■ **ಹಂಪಿ ಟೈಮ್ಸ್ ಕೊಟ್ಟೂರು**

ಲೋಕಸಭೆ ಚುನಾವಣೆ ಹಿನ್ನೆಲೆ ನೀತಿ ಸಮಿತಿ ಜಾರಿ ಇರುವುದರಿಂದ ಚುನಾವಣಾ ಆಯೋಗದ ನಿರ್ದೇಶನದಂತೆ ಯಾವುದೇ ಮೆರವಣಿಗೆ ಹಾಗೂ ಸಭೆ ಸಮಾರಂಭಗಳನ್ನು ನಡೆಸಲು ಅವಕಾಶ ಇಲ್ಲದಿರುವ ಕಾರಣ ಪಟ್ಟಣದ ತಾಲೂಕು ಕಚೇರಿ ಮಹಾತ್ಮ ಗಾಂಧಿಜೀ ಸಭಾಂಗಣದಲ್ಲಿ ಏ–5 ರಂದು ಹಸಿರು ಕ್ರಾಂತಿಯ ಹರಿಕಾರ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನ್ ರಾಮ್ ಅವರ 117ನೇ ಜನ್ಮ ದಿನಾಚರಣೆ ಹಾಗೂ ಇದೇ 14 ರಂದು ಭಾರತ ರತ್ನ ಸಂವಿಧಾನದ ಶಿಲ್ಪಿ ಡಾ. ಬಿ. ಆರ್. ಅಂಬೇಡ್ಕರ್ ಅವರ 133 ನೆಯ ಜನ್ಮ ದಿನಾಚರಣೆಯನ್ನು ಸರಳವಾಗಿ ಆಚರಣೆ ಮಾಡಲಾಗುತ್ತದೆ ಎಂದು ತಹಶಿಲ್ದಾರ ಅಮರೇಶ್ ಜಿ. ಕೆ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ಪಟ್ಟಣ ಪಂಚಾಯಿತಿ, ಹಾಗೂ ಸಮಾಜ ಕಲ್ಯಾಣ ಇಲಾಖೆ ಕೊಟ್ಟೂರು ಇವರ ಸಂಯುಕ್ತಾಶ್ರಯದಲ್ಲಿ ತಾಲೂಕಿನ ದಲಿತಪರ, ಕನ್ನಡ ಪರ ಹಾಗೂ ವಿವಿಧ ಸಂಘಟನೆಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಪದಾಧಿಕಾರಿಗಳು ಜಯಂತಿ ಕಾರ್ಯಕ್ರಮಕ್ಕೆ ಹಾಜರಿಯಾಗಿ ಯಶಸ್ವಿಗೊಳಿಸ ಬೇಕು ಎಂದು ತಿಳಿಸಿದ್ದಾರೆ.

# ಚುನಾವಣಾ ವೆಚ್ಚದ ತರಬೇತಿ

## ಜಿಲ್ಲಾ ಪಂಚಾಯತ್ ಸಿಇಒ ಸದಾಶಿವ ಪ್ರಭು ಬಿ. ಸೂಚನೆ



■ **ಹಂಪಿ ಟೈಮ್ಸ್ ಹೊಸಪೇಟೆ**

ಸಾರ್ವತ್ರಿಕ ಲೋಕಸಭಾ ಚುನಾವಣೆ–2024ರ ಹಿನ್ನೆಲೆಯಲ್ಲಿ ವಿಜಯನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇಎಸ್‌ಟಿ, ವಿಎಸ್‌ಟಿ, ವಿವಿಟಿ, ಎಸ್‌ಎಸ್‌ಟಿ ತಂಡದ ಸಿಬ್ಬಂದಿಗೆ ಚುನಾವಣಾ ವೆಚ್ಚದ ತರಬೇತಿ ಕಾರ್ಯಕ್ರಮವು ಹೊಸಪೇಟೆ ತಾಲೂಕು ಪಂಚಾಯತಿ ಕಾರ್ಯಾಲಯದಲ್ಲಿ ಬುಧವಾರ ನಡೆಯಿತು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸದಾಶಿವ ಪ್ರಭು ಬಿ. ಅವರು ಮಾತನಾಡಿ, ಚುನಾವಣೆಗಳು ಪ್ರಜಾಪ್ರಭುತ್ವ ದೇಶವೊಂದರ ಅತಿ ಪ್ರಮುಖ ಮತ್ತು ಸೂಕ್ಷ್ಮ ಘಟ್ಟವಾಗಿದೆ. ಆದ್ದರಿಂದ ಚುನಾವಣೆ ಹಿನ್ನೆಲೆಯಲ್ಲಿ ಬೇರೆ ಬೇರೆ ಕಾರ್ಯದಲ್ಲಿ ತೊಡಗಿರುವ ಸಿಬ್ಬಂದಿಯು ಚುನಾವಣೆಗಳು ಮುಕ್ತ ಮತ್ತು ನ್ಯಾಯಸಮ್ಮತ ರೀತಿಯಲ್ಲಿ ನಡೆಯುವಂತೆ ನೋಡಿಕೊಳ್ಳುವುದು ಚುನಾವಣಾ ಸಿಬ್ಬಂದಿಯ ಆದ್ಯ ಕರ್ತವ್ಯವಾಗಿದೆ ಎಂಬುದನ್ನು ಅರಿಯಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿಯ ಮುಖ್ಯ ಲೆಕ್ಕಾಧಿಕಾರಿ ಶ್ರೀನಿವಾಸ ಸಿ.ಜಿ., ಲೆಕ್ಕಾಧಿಕಾರಿಗಳಾದ ರಿಯಾಜ್ ಮತ್ತು ದಿನೇಶ ತರಬೇತಿ ಕಾರ್ಯಕ್ರಮದಲ್ಲಿ ಚುನಾವಣೆ ವೆಚ್ಚ ವಿಡಿಯೋ ದಾಖಲೀಕರಣ ಸೇರಿದಂತೆ ವಿವಿಧ ವಿಷಯಗಳ ಕುರಿತಂತೆ ಮಾತನಾಡಿದರು. ಜಿಲ್ಲಾ ಪಂಚಾಯತ್‌ನ ವಿನಯ್‌ಕುಮಾರ ನಿರ್ವಹಿಸಿದರು.









# ಸದೃಢ ಪ್ರಜಾಪ್ರಭುತ್ವ ನಿರ್ಮಾಣಕ್ಕಾಗಿ ಮತದಾನ ಅಗತ್ಯ

**ಹಂಪಿ ಟೈಮ್ಸ್ ಬಳ್ಳಾರಿ**

ಮತದಾನವು ಪ್ರಜಾಪ್ರಭುತ್ವದ ಅವಿಭಾಜ್ಯ ಅಂಗವಾಗಿದ್ದು, ಸದೃಢ ಪ್ರಜಾಪ್ರಭುತ್ವದ ಚೌಕಟ್ಟನ್ನು ನಿರ್ಮಾಣ ಮಾಡುತ್ತದೆ ಎಂದು ಸರಳಾದೇವಿ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ.ಹೊನ್ನೂರಲಿ ಹೇಳಿದರು. ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಭಾರತ ಸರ್ಕಾರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ ಹಾಗೂ ಬೆಂಗಳೂರು ಪ್ರಾದೇಶಿಕ ನಿರ್ದೇಶಕರು ರಾಷ್ಟ್ರೀಯ ಸೇವಾ ಯೋಜನೆ ಹಾಗೂ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕಗಳು ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಶೌರ್ಯ ದಿನದ ಅಂಗವಾಗಿ ಜಂಟಿಯಾಗಿ ಬುಧವಾರ ಆಯೋಜಿಸಿದ್ದ 'ಸ್ವಚ್ಛತಾ ಅಭಿಯಾನ ಮತ್ತು ಮತದಾನ ಜಾಗೃತಿ ಚಾಲನೆ' ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸದಲ್ಲಿ ಮಾತನಾಡಿದರು. ಮತದಾನಕ್ಕೆ ಸಂವಿಧಾನದಲ್ಲಿ ವಿಶೇಷವಾದ ಅರ್ಥವಿದೆ. ಪ್ರಸ್ತುತದಲ್ಲಿ ಅನಕ್ಷರಸ್ಥರು, ಬಡವರು, ಸಮಾಜದ ಕೆಳವರ್ಗದವರು ಮತದಾನ ಮಾಡಲು ಮುಂದಾಗುವರು. ಅಕ್ಷರಸ್ಥರು, ಬುದ್ದಿಜೀವಿಗಳು ಮತದಾನಕ್ಕೆ ಮುಂದಾಗುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

ವಿಶ್ವವಿದ್ಯಾಲಯದ ಕುಲಸಚಿವರಾದ ಎಸ್. ಎನ್ ರುದ್ರೇಶ ಮಾತನಾಡಿದರು. ವಿವಿಧ ನಿಕಾಯಗಳ ಡೀನರು, ಮುಖ್ಯಸ್ಥರು, ಸಿಬ್ಬಂದಿ, ಇತರರಿದ್ದರು.

# ಅರ್ಹರು ತಪ್ಪದೇ ಮತ ನೀಡಿ

## ತಾಪಂ ಇಒ ಮಡಗಿನ ಬಸಪ್ಪ ಹೇಳಿಕೆ | ಬಳ್ಳಾರಿ ಗ್ರಾಮೀಣ ಕ್ಷೇತ್ರದಲ್ಲಿ ಮತದಾನ ಜಾಗೃತಿ




■ **ಹಂಪಿ ಟೈಮ್ಸ್ ಬಳ್ಳಾರಿ**

ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಮೇ 7 ರಂದು ನಡೆಯುವ ಮತದಾನ ದಿನದಂದು ಎಲ್ಲಾ ಅರ್ಹ ಮತದಾರರು ತಪ್ಪದೇ ಮತದಾನ ಮಾಡಬೇಕು ಎಂದು ಬಳ್ಳಾರಿ ತಾಲ್ಲೂಕು ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ತಾಪಂ ಇಒ ಮಡಗಿನ ಬಸಪ್ಪ ಅವರು ಹೇಳಿದರು.

ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿ, ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಮತ್ತು ಬಳ್ಳಾರಿ ತಾಲ್ಲೂಕು ಪಂಚಾಯತ್ ಇವರ ಸಂಯುಕ್ತಾಶ್ರಯದಲ್ಲಿ 93–ಬಳ್ಳಾರಿ ಗ್ರಾಮೀಣ ಕ್ಷೇತ್ರ ವ್ಯಾಪ್ತಿಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮತದಾನವು ಅಮೂಲ್ಯವಾಗಿದ್ದು, ಎಲ್ಲಾ ಪ್ರಜೆಗಳ ಮೂಲಭೂತ ಕರ್ತವ್ಯವೂ ಕೂಡ. ನಾಳಿನ ಒಳಿತಿಗಾಗಿ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ತಿಳಿಸಿದರು.

ಮತದಾರರು ಯಾವುದೇ ರೀತಿಯ ಒತ್ತಡ ಹಾಗೂ ಆಮಿಷಕ್ಕೆ ಒಳಗಾಗದೆ ನಿರ್ಭಯವಾಗಿ ತಮ್ಮ ನೆಚ್ಚಿನ ಅಭ್ಯರ್ಥಿಗೆ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ತಿಳಿಸಲಾಯಿತು.

ಮತದಾನ ಜಾಗೃತಿ ಜಾಥಾವು ಬೆಳಗಲ್‌ಕ್ರಾಸ್ ವೃತ್ತದಿಂದ ಆರಂಭವಾಗಿ ಕೌಲ್‌ಬಜಾರ್ ಮುಖ್ಯ ರಸ್ತೆ ಮೂಲಕ ಫಸ್ಟ್ ಗೇಟ್‌ವರೆಗೆ ತಲುಪಿತು. ಜಾಥಾದಲ್ಲಿ ಸಹಾಯವಾಣಿ ಸಂಖ್ಯೆ 1950, ಸಿ–ವಿಜಿಲ್ ಆಪ್ ಹಾಗೂ ಇತರೆ ಮಾಹಿತಿಗಳನ್ನೊಳಗೊಂಡ ಜಾಗೃತಿ ಫಲಕಗಳ ಮೂಲಕ ರಸ್ತೆಯುದ್ದಕ್ಕೂ ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಬಳ್ಳಾರಿ ಮಹಾನಗರ ಪಾಲಿಕೆ ವಲಯ 3ರ ಆಯುಕ್ತರು ಹಾಗೂ ಪಾಲಿಕೆ ಸಿಬ್ಬಂದಿಗಳು, ಬೂತ್ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿಯವರು, ಇತರರು ಹಾಜರಿದ್ದರು.






# 6 ನೇ ತರಗತಿ ಉಚಿತ ಪ್ರವೇಶಕ್ಕೆ ಅರ್ಜಿ ಆಹ್ವಾನ

■ **ಹಂಪಿ ಟೈಮ್ಸ್ ಬಳ್ಳಾರಿ**

ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ (ಆಂಗ್ಲ ಮಾಧ್ಯಮ) ಶಾಲೆ ಹಾಗೂ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ (ಸಿಬಿಎಸ್‌ಸಿ) ಗಳ 2024–25 ನೇ ಶೈಕ್ಷಣಿಕ ಸಾಲಿಗೆ 6 ನೇ ತರಗತಿಗೆ ಉಚಿತ ಪ್ರವೇಶಕ್ಕಾಗಿ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಏ.15 ರ ವರೆಗೆ ವಿಸ್ತರಿಸಲಾಗಿದೆ ಎಂದು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ತಿಳಿಸಿದ್ದಾರೆ.

ಸೇವಾಸಿಂಧು ಆನ್‌ಲೈನ್ ಪೋರ್ಟಲ್ https://sevasindhuservices.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

**ಶಾಲೆಗಳ ವಿವರ:** ಬಳ್ಳಾರಿ ತಾಲೂಕಿನ ಕೊಳಗಲ್ಲಿನ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ(ಸಿ.ಬಿ.ಎಸ್.ಸಿ) ಯ ಪ್ರಾಂಶುಪಾಲರ ಮೊ.7353346069. ಸಂಡೂರು ತಾಲೂಕಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆಯ ಪ್ರಾಂಶುಪಾಲರ ಮೊ.9480933730. ಕಂಪ್ಲಿ ತಾಲೂಕಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆಯ ಪ್ರಾಂಶುಪಾಲರ ಮೊ.9113280239.

ಸಂಕ್ಷಿಪ್ತ ಅಧಿಸೂಚನೆ ಮತ್ತು ವಿವರಗಳಿಗಾಗಿ http://dom.karnataka.gov.in ವೆಬ್‌ಸೈಟ್‌ಗೆ ಭೇಟಿ ನೀಡಬಹುದು.

**ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳ ಸಂಪರ್ಕ ವಿವರ:** ಬಳ್ಳಾರಿ–8310321101, ಸಂಡೂರು –9036925966, 8660575067 ಮತ್ತು ಸಿರುಗುಪ್ಪ –9148889975. ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾ ಅಲ್ಪಸಂಖ್ಯಾತರ ಜಿಲ್ಲಾ ಅಧಿಕಾರಿಗಳ ಕಾರ್ಯಾಲಯದ ದೂ.08392–200125/224, ಸಂಪರ್ಕಿಸಬಹುದು.

Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA